# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 380 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 07.12.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅಬಕಾರಿ ಇಲಾಖೆಯಿಂದ ಮದ್ಯದ ಅಂಗಡಿ ತೆರೆಯಲು ಯಾವ-ಯಾವ ಪರವಾನಿಗೆಗಳನ್ನು ನೀಡಲಾಗುತ್ತಿದೆ; ಆಯ್ಕೆಗೆ ಇರುವ ಮಾನದಂಡಗಳೇನು; (ಮಾಹಿತಿ ನೀಡುವುದು) | 1992ನೇ ಸಾಲಿನಿಂದ ಹೊಸದಾಗಿ ಸಿಎಲ್-2 ಹಾಗೂ ಸಿಎಲ್-9 ಸನ್ನದನ್ನು ನೀಡಲು ಸರ್ಕಾರ ನಿರ್ಬಂಧಿಸಿರುವುದರಿಂದ ಅಬಕಾರಿ ಇಲಾಖೆಯಿಂದ ಹೊಸದಾಗಿ ಸಿಎಲ್-2 ಮತ್ತು ಸಿಎಲ್-9 ಸನ್ನದುಗಳ ಮಂಜೂರಾತಿ ನೀಡಲಾಗುತ್ತಿಲ್ಲ.<br><br>ಪ್ರಸ್ತುತ ಸಿಎಲ್-4, ಸಿಎಲ್-6ಎ, ಸಿಎಲ್-7, ಸಿಎಲ್-8, ಸಿಎಲ್-7ಎ, ಸಿಎಲ್-11ಸಿ, ಫಾರ್ಮ್ ಸಿಎಲ್-16, ಫಾರ್ಮ್ ಸಿಎಲ್-17 ಮತ್ತು ಫಾರ್ಮ್ ಸಿಎಲ್-18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3 ಮತ್ತು 5 ರಡಿ ಹೊಸದಾಗಿ ಮಂಜೂರು ಮಾಡಲಾಗುತ್ತಿದೆ. ಸದರಿ ಸನ್ನದುಗಳಿಗೆ ಸಂಬಂಧಪಟ್ಟಂತೆ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು 1968 ರ ನಿಯಮ 8, 8(ಎ) ರಲ್ಲಿ ನಿಗಧಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕಗಳನ್ನು ಅರ್ಜಿದಾರರಿಂದ ಪಾವತಿಸಿಕೊಂಡು ಅರ್ಜಿ ಪಡೆಯಲಾಗುತ್ತದೆ. ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 |

| | | |
|---|---|---|
| | | ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಯಾವುದೇ ರಾಜ್ಯ ಸರ್ಕಾರದ/ಕೇಂದ್ರ ಸರ್ಕಾರದ ಕಛೇರಿಯಾಗಲೀ ಅಥವಾ ಸ್ಥಳೀಯ ಸಂಸ್ಥೆಗಳ ಕಛೇರಿಯಾಗಲೀ ಅವುಗಳ ಮುಖ್ಯಸ್ಥರು ಗ್ರೂಪ್ "ಎ" ಅಥವಾ ಗ್ರೂಪ್ "ಬಿ" ಅಧಿಕಾರಿಯಾಗಿದ್ದಲ್ಲಿ ಆ ಕಛೇರಿಯು ಆಕ್ಷೇಪಣಾ ಸ್ಥಳವೆಂದು ಪರಿಗಣಿಸಲ್ಪಡುತ್ತದೆ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:12164–12166/2016ರ ದಿನಾಂಕ:31.03.2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಅಂತರದಲ್ಲಿ ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ / ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಅಂತರದಲ್ಲಿ ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ:11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 36 ಇಡಬ್ಲ್ಯೂಪಿ 2018, ದಿನಾಂಕ: |

| | | |
|---|---|---|
| | | ಕ್ಷೇತ್ರಗಳಿಗೆ ಪ್ರತಿ ಕ್ಷೇತ್ರಕ್ಕೆ 4 ಸನ್ನದುಗಳಂತೆ ಒಟ್ಟು 880, ಯಾದಗಿರಿ ಜಿಲ್ಲೆಯ ನಾಲ್ಕೂ ವಿಧಾನ ಸಭಾ ಕ್ಷೇತ್ರಗಳಿಗೆ ತಲಾ 5 ರಂತೆ ಒಟ್ಟು 20, ಹೀಗೆ ರಾಜ್ಯದಲ್ಲಿ ಒಟ್ಟಾರೆ 900 ಸಿಎಲ್ 11-ಸಿ ಸನ್ನದುಗಳನ್ನು ಎಂ.ಎಸ್.ಐ.ಎಲ್ ಸಂಸ್ಥೆಗೆ ಮಂಜೂರಾತಿ ನೀಡಲು ಸರ್ಕಾರವು ಅನುಮತಿ ನೀಡಿರುತ್ತದೆ. |
| ಆ | ಅಬಕಾರಿ ಇಲಾಖೆಗೆ ಯಾವ-ಯಾವ ಮೂಲಗಳಿಂದ ಆದಾಯ ಬರುತ್ತಿದೆ; ಇಲಾಖೆಯ ಒಟ್ಟು ವಾರ್ಷಿಕ ಆದಾಯವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರವು 2023-24ನೇ ಸಾಲಿನಲ್ಲಿ ಅಬಕಾರಿ ರೂ.36,000 ಕೋಟಿಗಳ ರಾಜಸ್ವ ಸಂಗ್ರಹಣೆ ಗುರಿ ನಿಗದಿಪಡಿಸಿದೆ. ಏಪ್ರಿಲ್ 2023 ರಿಂದ ನವೆಂಬರ್ 2023ರ ಅಂತ್ಯಕ್ಕೆ ರೂ.22,157.25 ಕೋಟಿಗಳ ಅಬಕಾರಿ ರಾಜಸ್ವ ಸಂಗ್ರಹಿಸಿದ್ದು, ವಾರ್ಷಿಕ ಗುರಿಗೆ ಶೇ.61.55 ರಷ್ಟು ಗುರಿ ಸಾಧನೆಯಾಗಿರುತ್ತದೆ. ಕಳೆದ ವರ್ಷ ಇದೇ ಅವಧಿಯಲ್ಲಿ ರೂ.19,656.27 ಕೋಟಿಗಳ ರಾಜಸ್ವ ಸಂಗ್ರಹಿಸಿದ್ದು, ಹಿಂದಿನ ಸಾಲಿಗೆ ಹೋಲಿಸಿದಲ್ಲಿ ರೂ.2,500.98 ಕೋಟಿಗಳ ಹೆಚ್ಚಿನ ರಾಜಸ್ವವನ್ನು ಸಂಗ್ರಹಿಸಿ, ಶೇಕಡ 12.72 ರಷ್ಟು ಬೆಳವಣಿಗೆ ಸಾಧಿಸಲಾಗಿದೆ.<br><br>ಅಬಕಾರಿ ಇಲಾಖೆಗೆ ಕೆಳಕಂಡ ಮೂಲಗಳಿಂದ ರಾಜಸ್ವ ಸಂಗ್ರಹವಾಗುತ್ತಿದ್ದು, ವಿವರಗಳು ಕೆಳಕಂಡಂತಿದೆ. |

| ಮೂಲ | ಸಂಗ್ರಹಿಸಲಾದ ಅಬಕಾರಿ ರಾಜಸ್ವ (ರೂ.ಕೋಟಿಗಳಲ್ಲಿ) | |
|---|---|---|
| | **2022-23** (ಏಪ್ರಿಲ್ ರಿಂದ ಮಾರ್ಚ್ ರವರೆಗೆ) | **2023-24** (ಏಪ್ರಿಲ್ ರಿಂದ ನವೆಂಬರ್ ಅಂತ್ಯಕ್ಕೆ) |
| ಭಾ.ತ.ಮ | 24,663.85 | 17,864.48 |
| ಬಿಯರ್ | 4,460.60 | 3,515.76 |
| ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ | 745.84 | 733.95 |
| ದಂಡ ಮತ್ತು ಇತರೆ | 50.08 | 43.06 |
| ಒಟ್ಟು | 29,920.37 | 22,157.25 |

| | | |
|---|---|---|
| | | 06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯಿತಿ/ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್‌ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಠಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್-7(ಎ) ಸನ್ನದುಗಳಿಗೆ (ಸರ್ಕಾರದ ಸಂಸ್ಥೆಗಳಾದ ಐ.ಟಿ.ಡಿ.ಸಿ ಮತ್ತು ಕೆ.ಎಸ್.ಡಿ.ಟಿ.ಸಿ) ಅನುಮತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 07 ಇಎಫ್‌ಎಲ್ 2008, ದಿನಾಂಕ: 03.07.2009 ರಲ್ಲಿ ರಾಜ್ಯದ ಪ್ರತಿ ತಾಲ್ಲೂಕಿಗೆ ಕನಿಷ್ಟ 2 ಸನ್ನದುಗಳಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ.<br><br>ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಆಇ 15 ಇಎಫ್‌ಎಲ್ 2015, ದಿ:23.09.2016 ರಲ್ಲಿ ರಾಜ್ಯದ 220 ವಿಧಾನ ಸಭಾ |

| | | |
|---|---|---|
| | | (ಮರು ಹೊಂದಾಣಿಕೆಗೆ ಒಳಪಟ್ಟಿದೆ) |
| ಇ | ಸದರಿ ಇಲಾಖೆಯಿಂದ ಬರುವ ಆದಾಯದಲ್ಲಿ ಯಾವ-ಯಾವ ಯೋಜನೆಗಳನ್ನು ಈ ಆದಾಯವನ್ನು ಬಳಸಿಕೊಳ್ಳಲಾಗುತ್ತಿದೆ; (ಮಾಹಿತಿ ನೀಡುವುದು) | ಅಬಕಾರಿ ಇಲಾಖೆಯಿಂದ ಸಂಗ್ರಹಿಸುತ್ತಿರುವ ಆದಾಯವನ್ನು ರಾಜ್ಯ ಸರ್ಕಾರದ ಸಂಚಿತ ನಿಧಿಗೆ ಜಮೆಗೊಳಿಸಲಾಗುತ್ತದೆ. ರಾಜ್ಯದ ಎಲ್ಲಾ ಮೂಲಗಳಿಂದ ಸಂಗ್ರಹವಾಗುವ ಆದಾಯಗಳನ್ನು ಒಟ್ಟುಗೂಡಿಸಿ ಆಯವ್ಯಯದಲ್ಲಿ ಅನುಮೋದನೆಯಾದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. |
| ಈ | ಇನ್ನು ಹೆಚ್ಚಿನ ಆದಾಯ ಬರಲು ಇಲಾಖೆ ಕೈಗೊಳ್ಳುತ್ತಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಸರ್ಕಾರವು ನಿಗದಿಪಡಿಸುವ ರಾಜಸ್ವದ ಗುರಿಯನ್ನು ಸಾಧಿಸಲು ರಾಜ್ಯ / ವಿಭಾಗ / ಜಿಲ್ಲೆಗಳಲ್ಲಿ ಆಗಿಂದ್ದಾಗ್ಗೆ ಸಭೆಗಳನ್ನು ಆಯೋಜಿಸಿ ಪ್ರತಿ ತಿಂಗಳು ಮದ್ಯ ಬಳಕೆಯ ನಿರೀಕ್ಷೆಯ ಸಾಧನೆಯನ್ನು ಪುನರ್ ವಿಮರ್ಶಿಸಲಾಗುತ್ತಿದೆ. ಎಲ್ಲಾ ಅಧೀನ ಅಧಿಕಾರಿಗಳಿಗೆ ಹಾಗೂ ಕಾರ್ಯಪಾಲಕ ಸಿಬ್ಬಂದಿಗೆ ಅಗತ್ಯ ಸೂಚನೆ / ನಿರ್ದೇಶನಗಳನ್ನು ನೀಡಿ ಅಬಕಾರಿ ಕಾಯ್ದೆ ಹಾಗೂ ತತ್ಸಂಬಂಧ ನಿಯಮಗಳನ್ನು ಜಾರಿಗೊಳಿಸುವಲ್ಲಿ ಅಗತ್ಯ ಕ್ರಮ ಜರುಗಿಸಿ, ಅಬಕಾರಿ ಜಾರಿ ಮತ್ತು ತನಿಖಾ ಕೈಪಿಡಿಯ ಸೂಚನೆಗಳಂತೆ ಸನ್ನದು ಆವರಣದ ತಪಾಸಣೆ ಆಗಿಂದಾಗ್ಗೆ ಕೈಗೊಂಡು ಸನ್ನದು ಆವರಣಗಳಲ್ಲಿ ಸನ್ನದು ಷರತ್ತು ಉಲ್ಲಂಘನೆ ಆಗದಂತೆ ಕಟ್ಟೆಚ್ಚರ ವಹಿಸಲು ಸೂಚಿಸಲಾಗುತ್ತಿದೆ.<br><br>ಸನ್ನದೇತರ ಪ್ರದೇಶಗಳಲ್ಲಿ ಅನಧಿಕೃತ ಮದ್ಯ ಮಾರಾಟದ ಬಗ್ಗೆ ಅಗತ್ಯ ಕ್ರಮಗಳನ್ನು ಕೈಗೊಂಡು, ರಸ್ತೆಗಾವಲು, ರಾತ್ರಿಗಸ್ತು ಚುರುಕುಗೊಳಿಸುವುದು, ಗಸ್ತು ಮಾರ್ಗದಲ್ಲಿ ಪೂರ್ವಾಪರಾಧಿಗಳ ಬಗ್ಗೆ ವಿಶೇಷ ನಿಗಾ ಇಡುವುದು, ಹೊರ ರಾಜ್ಯಗಳ ಮದ್ಯಯನ್ನು ತಡೆಗಟ್ಟುವುದು, ಸನ್ನದು ಆವರಣಗಳಲ್ಲಿ ಕಲಬೆರಕೆ ಮದ್ಯ / ನೀರು ಬೆರೆಸಿದ ಮದ್ಯ / ಅನಧಿಕೃತ ಮದ್ಯ, |

| | | |
|---|---|---|
| | | ಸುಂಕ ಪಾವತಿಸದ ಮದ್ಯ ಮಾರಾಟವಾಗದಂತೆ ಜಾರಿಗೊಳಿಸುವಿಕೆ ಕ್ರಮವನ್ನು ಚುರುಕುಗೊಳಿಸಲಾಗುತ್ತಿದೆ. ಇದರಿಂದ ನಕಲಿ ಮದ್ಯ/ಸುಂಕ ಪಾವತಿಸದ ಮದ್ಯ ನಿರ್ಮೂಲನೆ ಮಾಡಿ ಅಸಲಿ ಮದ್ಯ/ಸುಂಕ ಪಾವತಿಸಿದ ಮದ್ಯ ಬಳಕೆ ಹೆಚ್ಚಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ಈ ಮೇಲಿನ ಕ್ರಮಗಳಿಂದ ಅಬಕಾರಿ ಇಲಾಖೆಯ ರಾಜಸ್ವವು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಲೇ ಬಂದಿರುತ್ತದೆ. |

**ಆಇ 69 ಇಎಲ್‌ಕ್ಯೂ 2023**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು